**Akashvani: Bangalore**
**National Bulletin In Kannada**
**10.04.2025 : 13.10 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**10.04.2025 : 13.10 p.m.**

ಮುಖ್ಯಾಂಶಗಳು :

1. ದೇಶಾದ್ಯಂತ ಇಂದು ಮಹಾವೀರ ಜಯಂತಿ ಆಚರಣೆ ; ಗಣ್ಯರ ಶುಭಾಶಯ
2. ದೆಹಲಿಯಲ್ಲಿ ಇಂದಿನಿಂದ ೯ನೇ ಜಾಗತಿಕ ತಂತ್ರಜ್ಞಾನ ಶೃಂಗಸಭೆ ಆರಂಭ
3. ಮುಂಬೈ ಸ್ಫೋಟ ಪ್ರಕರಣದ ಆರೋಪಿ ತಹವೂರ್ ರಾಣಾ ಇಂದು ಭಾರತಕ್ಕೆ ಆಗಮನ ನಿರೀಕ್ಷೆ ; ವಾದ ಮಂಡನೆಗೆ ವಕೀಲರ ನೇಮಕ
4. ಇಂದು ವಿಶ್ವ ಹೋಮಿಯೋಪತಿ ದಿನ ; ಜನಪ್ರಿಯವಾಗುತ್ತಿರುವ ಸಮಗ್ರ ಆರೋಗ್ಯ ರಕ್ಷಣಾ ವಿಧಾನ
5. ಐಪಿಎಲ್ ಟಿ-೨೦ ಕ್ರಿಕೆಟ್ ; ಇಂದು ರಾಯಲ್ ಚಾಲೆಂಜರ್ಸ್ ಬೆಂಗಳೂರು -ಡೆಲ್ಲಿ ಕ್ಯಾಪಿಟಲ್ಸ್ ತಂಡಗಳು ಮುಖಾಮುಖಿ

**********

ದೇಶಾದ್ಯಂತ ಇಂದು ಮಹಾವೀರ ಜಯಂತಿಯನ್ನು ಆಚರಿಸಲಾಗುತ್ತಿದೆ. ಇಂದು ೨೪ನೇ ಹಾಗೂ ಕೊನೆಯ ಜೈನ ತೀರ್ಥಂಕರ ಮಹಾವೀರ ಅವರ ಜನ್ಮದಿನ. ಜೈನ ಸಮುದಾಯಕ್ಕೆ ಇದು ಅತ್ಯಂತ ಪವಿತ್ರ ದಿನವಾಗಿದೆ. ಭಗವಾನ್ ಮಹಾವೀರನ ಅನುಯಾಯಿಗಳು ಇಂದು ವಿಶೇಷ ಪ್ರಾರ್ಥನೆ, ಮಂತ್ರ ಪಠಣ ಮಾಡುವುದಲ್ಲದೇ ಪ್ರಸಾದವನ್ನು ವಿತರಿಸುವುದು ಹಾಗೂ ಮೆರವಣಿಗೆ ಕಾರ್ಯಕ್ರಮಗಳಲ್ಲಿ ಭಾಗವಹಿಸುತ್ತಿದ್ದಾರೆ. ಮಹಾವೀರ ಜಯಂತಿ ಹಿನ್ನೆಲೆಯಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್, ಪ್ರಧಾನಿ ನರೇಂದ್ರ ಮೋದಿ ಸೇರಿದಂತೆ ಹಲವು ಗಣ್ಯರು ಶುಭ ಕೋರಿದ್ದಾರೆ. ರಾಷ್ಟ್ರಪತಿ ಅವರು, ತಮ್ಮ ಸಂದೇಶದಲ್ಲಿ ಭಗವಾನ್ ಮಹಾವೀರ್ ಅವರು, ಅಹಿಂಸೆ ಮತ್ತು ಅನುಕಂಪದ ಸಂಕೇತವಾಗಿದ್ದಾರೆ. ಅವರು, ಅಹಿಂಸಾ ಪರಮೊ ಧರ್ಮ ಎಂಬ ಸಂದೇಶದ ಮೂಲಕ ಮನುಕುಲಕ್ಕೆ ಹೊಸ ಹಾದಿಯನ್ನು ತೋರಿಸಿಕೊಟ್ಟಿದ್ದಾರೆ. ಅಲ್ಲದೇ ಮಹಾವೀರ ಅವರ ಸರಳತೆ, ದಯೆ, ತತ್ವಗಳನ್ನು ಪ್ರತಿಪಾದಿಸಿದ್ದರು ಎಂದು ಹೇಳಿದ್ದಾರೆ. ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ತಮ್ಮ ಸಂದೇಶದಲ್ಲಿ ಭಗವಾನ್ ಮಹಾವೀರರ

ಬೋದನೆಗಳು ಹೆಚ್ಚಿನ ಸಹಾನುಬೂತಿ ಮತ್ತು ಸಾಮರಸ್ಯದ ಜಗತ್ತಿನತ್ತ ನಮ್ಮ ಹಾದಿಯನ್ನು ಬೆಳಗಿಸುತ್ತಿವೆ. ಎಲ್ಲ ಜೀವಿಗಳಿಗೆ ಸಮಾನತೆ ಮತ್ತು ವಿಭಿನ್ನ ದೃಷ್ಟಿಕೋನದಲ್ಲಿ ನೋಡುವ ಸಂದೇಶವನ್ನು ಸಾರಿದ್ದಾರೆ ಎಂದು ತಿಳಿಸಿದ್ದಾರೆ. ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ಮಹಾವೀರ ಜಯಂತಿ ಅಂಗವಾಗಿ ಜೈನ ಸಮುದಾಯಕ್ಕೆ ಶುಭಾಶಯ ಕೋರಿದ್ದಾರೆ. ಅವರು ತಮ್ಮ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಭಗವಾನ್ ಮಹಾವೀರರ ಆದರ್ಶಗಳು ಜಗತ್ತಿನೆಲ್ಲೆಡೆ ಅಸಖ್ಯಾಂತ ಜನರಿಗೆ ಶಕ್ತಿಯನ್ನು ನೀಡಿದೆ. ಅವರ ಬೋಧನೆಗಳನ್ನು ಜೈನ ಸಮುದಾಯ ಸುಂದರವಾಗಿ ಸಂರಕ್ಷಿಸಿ ಅವುಗಳನ್ನು ಪ್ರಚುರಪಡಿಸುತ್ತಿದೆ. ಭಗವಾನ್ ಮಹಾವೀರರ ಕನಸುಗಳನ್ನು ಸಾಕಾರಗೊಳಿಸಲು ಸರ್ಕಾರ ಬದ್ಧವಿದೆ. ಸರ್ಕಾರ ಪ್ರಾಕೃತ್ ಭಾಷೆಗೆ ಶಾಸ್ತ್ರೀಯ ಸ್ಥಾನಮಾನ ನೀಡುವ ಮೂಲಕ ಮಹಾವೀರರ ಬೋಧನೆಗಳನ್ನು ಮತ್ತಷ್ಟು ಜನಪ್ರಿಯಗೊಳಿಸಲಾಗುತ್ತಿದೆ ಎಂದರು.

**********

ದೆಹಲಿಯಲ್ಲಿ ಇಂದಿನಿಂದ ೩ ದಿನಗಳ ೯ನೇ ಜಾಗತಿಕ ತಂತ್ರಜ್ಞಾನ ಶೃಂಗಸಭೆ - ಜಿಟಿಎಸ್ - ೨೦೨೫ ನಡೆಯಲಿದೆ. ಈ ವರ್ಷದ ಶೃಂಗಸಭೆಯ ಘೋಷವಾಕ್ಯ 'ಸಂಭವನ - ಸಾಧ್ಯತೆಗಳು' ಎಂಬುದಾಗಿದೆ. ಎಲ್ಲವನ್ನೂ ಒಳಗೊಂಡ ಪ್ರಗತಿ, ಡಿಜಿಟಲ್ ಆಡಳಿತ ಬಲವರ್ಧನೆ ಮತ್ತು ಗಡಿಯಾಚಗಿನ ಸಹಭಾಗಿತ್ವ ವೃದ್ಧಿ ಸೇರಿದಂತೆ ಹೊಸ ತಂತ್ರಜ್ಞಾನಗಳ ಬಗ್ಗೆ ಅನ್ವೇಷಿಸುವುದು ಇದರ ಉದ್ದೇಶವಾಗಿದೆ. ಶೃಂಗಸಭೆಯಲ್ಲಿ ४೦ ಗೋಷ್ಠಿಗಳು ನಡೆಯಲಿದ್ದು, ಅದರಲ್ಲಿ ಸಚಿವರ ಸಂವಾದಗಳು, ತಜ್ಞರ ಚರ್ಚೆಗಳು, ಕಾರ್ಯತಾಂತ್ರಿಕ ಮಾತುಕತೆಗಳು ಒಳಗೊಂಡಿವೆ. ४ಂಕ್ಕೂ ಅಧಿಕ ರಾಷ್ಟ್ರಗಳ ೧೫೦ ಕ್ಕೂ ಅಧಿಕ ಭಾಷಣಕಾರರು ಜಗತ್ತು ಇಂದು ಎದುರಿಸುತ್ತಿರುವ ಮಹತ್ವದ ತಾಂತ್ರಿಕ ಸವಾಲುಗಳು ಮತ್ತು ಅವಕಾಶಗಳ ಕುರಿತು ಬೆಳಕು ಚೆಲ್ಲಲಿದ್ದಾರೆ. ಈ ಶೃಂಗಸಭೆಯಲ್ಲಿ ಮುಂದಿನ ಪೀಳಿಗೆಯ ಧ್ವನಿಯನ್ನು ಪ್ರತಿಬಿಂಬಿಸಲಾಗುವುದು.

**********

ನವೆಂಬರ್ ೨೬ರಂದು ಮುಂಬೈ ಮೇಲೆ ನಡೆದ ಭಯೋತ್ಪಾದಕ ದಾಳಿ ಪ್ರಕರಣದಲ್ಲಿ ಆರೋಪಿ ತಹವೂರ್ ರಾಣಾ ಸೇರಿದಂತೆ ಮತ್ತಿತರರ ವಿರುದ್ಧ ವಿಚಾರಣಾ ನ್ಯಾಯಾಲಯದಲ್ಲಿ ವಾದ ಮಂಡಿಸಲು ವಕೀಲ ನರೇಂದರ್ ಮಾನ್ ಅವರನ್ನು ವಿಶೇಷ ಪಬ್ಲಿಕ್ ಪ್ರಾಸಿಕ್ಯೂಟರ್ ಆಗಿ ನೇಮಕ ಮಾಡಿ ಕೇಂದ್ರ ಸರ್ಕಾರ ಆದೇಶ ಹೊರಡಿಸಿದೆ. ಈ ಕುರಿತು ಕೇಂದ್ರ ಗೃಹ ಸಚಿವಾಲಯ ದೆಹಲಿ

ಮತ್ತು ಇತರೆ ನ್ಯಾಯಾಲಯಗಳಲ್ಲಿ ಮೂರು ವರ್ಷಗಳ ಅವಧಿಗೆ ರಾಷ್ಟ್ರೀಯ ತನಿಖಾ ದಳದ ಪರವಾಗಿ ವಿಶೇಷ ನ್ಯಾಯಾಲಯಗಳಲ್ಲಿ ಮಾನ್ ಅವರು, ವಾದ ಮಂಡಿಸಲಿದ್ದಾರೆ ಎಂದು ಹೇಳಿದೆ. ಮುಂಬೈ ದಾಳಿಯ ಪ್ರಮುಖ ಆರೋಪಿಯಾಗಿರುವ ರಾಣಾ ತನ್ನ ಗಡಿಪಾರು ಆದೇಶವನ್ನು ಪ್ರಶ್ನಿಸಿ ಸಲ್ಲಿಸಿದ ಅರ್ಜಿಯನ್ನು ಅಮೆರಿಕದ ಸುಪ್ರೀಂಕೋರ್ಟ್ ವಜಾಗೊಳಿಸಿರುವ ಹಿನ್ನೆಲೆಯಲ್ಲಿ ಇಂದು ವಿಶೇಷ ವಿಮಾನದಲ್ಲಿ ರಾಣಾನನ್ನು ಭಾರತಕ್ಕೆ ವಾಪಸ್ ಕರೆತರಲಾಗುತ್ತಿದೆ.

**********

ಇಂದು ವಿಶ್ವದಾದ್ಯಂತ ವಿಶ್ವ ಹೋಮಿಯೋಪತಿ ದಿನವನ್ನು ಆಚರಿಸಲಾಗುತ್ತಿದೆ. ಹೋಮಿಯೋಪತಿಯು ವಿಶ್ವದ ಎರಡನೇ ಅತಿದೊಡ್ಡ ವೈದ್ಯಕೀಯ ವ್ಯವಸ್ಥೆಯಾಗಿದ್ದು, ಇದು ಆರೋಗ್ಯ ರಕ್ಷಣೆಗೆ ಸಮಗ್ರ ವಿಧಾನವನ್ನು ನೀಡುತ್ತದೆ, ಅದರ ನೈಸರ್ಗಿಕ, ಆಕ್ರಮಣಶೀಲವಲ್ಲದ ವಿಧಾನಗಳಿಗಾಗಿ ಇಂದು ವಿಶ್ವಾದ್ಯಂತ ಲಕ್ಷಾಂತರ ಜನರನ್ನು ಇದು ಆಕರ್ಷಿಸಿದೆ. ಆಯುಷ್ ಸಚಿವಾಲಯದ ಪ್ರಕಾರ, ದೇಶದಲ್ಲಿ ೧೦೦ ದಶಲಕ್ಷಕ್ಕೂ ಅಧಿಕ ಜನರು ತಮ್ಮ ಆರೋಗ್ಯ ಅಗತ್ಯಗಳಿಗಾಗಿ ಹೋಮಿಯೋಪತಿಯನ್ನು ನಂಬುತ್ತಾರೆ. ಸದ್ಯ ದೇಶದಲ್ಲಿ ಮೂರು ಲಕ್ಷ ೪೫ ಸಾವಿರ ನೋಂದಾಯಿತ ಹೋಮಿಯೋಪತಿ ವೈದ್ಯರು, ೨೭೭ ಆಸ್ಪತ್ರೆಗಳು, ಎಂಟು ಸಾವಿರಕ್ಕೂ ಹೆಚ್ಚು ಔಷಧಾಲಯಗಳು ಮತ್ತು ೨೭೭ ಶಿಕ್ಷಣ ಸಂಸ್ಥೆಗಳಿವೆ.

**********

ಪ್ರಧಾನಮಂತ್ರಿ ನರೇಂದ್ರ ಮೋದಿ ನಾಳೆ ಉತ್ತರ ಪ್ರದೇಶ ಮತ್ತು ಮಧ್ಯಪ್ರದೇಶಕ್ಕೆ ಭೇಟಿ ನೀಡಲಿದ್ದಾರೆ. ಅವರು ವಾರಣಾಸಿಗೆ ಭೇಟಿ ನೀಡಿ ಮೂರು ಸಾವಿರದ ೮೮೦ ಕೋಟಿ ರೂಪಾಯಿಗಳಿಗೂ ಅಧಿಕ ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಶಂಕುಸ್ಥಾಪನೆ ಮತ್ತು ಉದ್ಘಾಟನೆ ನೆರವೇರಿಸಲಿದ್ದಾರೆ. ೭೦ ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರಿಗೆ ಮೊದಲ ಬಾರಿಗೆ ಪ್ರಯೋಜನ ನೀಡುವ ಆಯುಷ್ಮಾನ್ ವಯೋ ವಂದನಾ ಕಾರ್ಡ್‌ಗಳನ್ನು ಸಹ ನರೇಂದ್ರ ಮೋದಿ ಹಸ್ತಾಂತರಿಸಲಿದ್ದಾರೆ. ಮೂಲಸೌಕರ್ಯ ಅಭಿವೃದ್ಧಿಗೆ, ವಿಶೇಷವಾಗಿ ವಾರಣಾಸಿಯಲ್ಲಿ ರಸ್ತೆ ಸಂಪರ್ಕ ಹೆಚ್ಚಿಸುವ ತಮ್ಮ ಬದ್ಧತೆಗೆ ಅನುಗುಣವಾಗಿ ಅವರು ವಿವಿಧ ರಸ್ತೆ ಯೋಜನೆಗಳ ಉದ್ಘಾಟನೆ ಮತ್ತು ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ವಿದ್ಯುತ್ ಮೂಲಸೌಕರ್ಯಕ್ಕೆ ಉತ್ತೇಜನ ನೀಡುವ ಮೂಲಕ, ಪ್ರಧಾನಿ ಅವರು ವಾರಣಾಸಿ ವಿಭಾಗದ ಜೌನ್‌ಪುರ, ಚಂದೌಲಿ ಮತ್ತು ಘಾಜಿಪುರ ಜಿಲ್ಲೆಗಳ ಒಂದು ಸಾವಿರದ ೪೫ ಕೋಟಿ ರೂಪಾಯಿಗಳಿಗೂ ಅಧಿಕ ಮೌಲ್ಯದ ಎರಡು ೪೦೦ ಕೆವಿ

ಮತ್ತು ಒಂದು ೨೨೦ ಕೆವಿ ಪ್ರಸರಣ ಉಪಕೇಂದ್ರಗಳು ಮತ್ತು ಸಂಬಂಧಿತ ಪ್ರಸರಣ ಮಾರ್ಗಗಳನ್ನು ಉದ್ಘಾಟಿಸಲಿದ್ದಾರೆ. ಮಧ್ಯಪ್ರದೇಶದಲ್ಲಿ ಪ್ರಧಾನಿ ನರೇಂದ್ರ ಮೋದಿ ಆನಂದಪುರ ಧಾಮದಲ್ಲಿ ಸಾರ್ವಜನಿಕ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ ಮತ್ತು ಈ ಸಂದರ್ಭದಲ್ಲಿ ಸಭೆಯನ್ನುದ್ದೇಶಿಸಿ ಮಾತನಾಡಲಿದ್ದಾರೆ. ಆನಂದಪುರ ಧಾಮವನ್ನು ಆಧ್ಯಾತ್ಮಿಕ ಮತ್ತು ಪರೋಪಕಾರಿ ಉದ್ದೇಶಗಳಿಗಾಗಿ ಸ್ಥಾಪಿಸಲಾಗಿದೆ. ಅವರು ಇಸಾಘರ್‌ನ ಗುರು ಜಿ ಮಹಾರಾಜ್ ದೇವಾಲಯದಲ್ಲಿ ಪೂಜೆ ಸಲ್ಲಿಸಿ, ದರ್ಶನ ಪಡೆಯಲಿದ್ದಾರೆ.

**********

ಹೊಸ ಆಧಾರ್ ಕಾಯ್ದೆಯನ್ನು ಡಿಜಿಟಲ್ ವೈಯಕ್ತಿಕ ದತ್ತಾಂಶ ಸಂರಕ್ಷಣಾ ಕಾಯ್ದೆ ೨೦೨೩ ರೊಂದಿಗೆ ಸಮನ್ವಯಗೊಳಿಸಲಾಗುವುದು ಎಂದು ಕೇಂದ್ರ ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್ ಹೇಳಿದ್ದಾರೆ. ಸಾಮಾಜಿಕ ಮಾಧ್ಯಮದ ವೀಡಿಯೊ ಪೋಸ್ಟ್‌ನಲ್ಲಿ ಅವರು, ಆಧಾರ್ ಕಾಯ್ದೆ ಜಾರಿಗೆ ಬಂದಾಗ ಕಾನೂನು ರಚನೆಯಲ್ಲಿ ಹಲವಾರು ಸಮಸ್ಯೆಗಳಿದ್ದವು, ಆದರೆ ಈಗ ಆ ಸಮಸ್ಯೆಗಳನ್ನು ಬಗೆಹರಿಸಲಾಗಿದೆ ಎಂದು ಸಚಿವರು ತಿಳಿಸಿದ್ದಾರೆ. ಅಂತೆಯೇ ಆಧಾರ್ ಕಾಯ್ದೆಯ ಆಧುನಿಕ ಆವೃತ್ತಿಯನ್ನು ತರುವ ಬಗ್ಗೆ ಅವರು ಒತ್ತಿ ಹೇಳಿದರು, ಇದು ಸಂಪೂರ್ಣವಾಗಿ ಬಳಕೆದಾರರ ಮೇಲೆ ಕೇಂದ್ರೀಕರಿಸುತ್ತದೆ. ಬಡ ಮತ್ತು ಮಧ್ಯಮ ವರ್ಗದ ಜನರ ಜೀವನದಲ್ಲಿ ಪರಿವರ್ತನಾತ್ಮಕ ಬದಲಾವಣೆಗಳನ್ನು ತರುವುದು ಈ ಸರ್ಕಾರದ ಉದ್ದೇಶವಾಗಿದೆ ಎಂದು ಅವರು ಹೇಳಿದರು.

ಧ್ವನಿ : ಅಶ್ವಿನಿ ವೈಷ್ಣವ್ (೧೧ ಸೆಕೆಂಡ್‌ಗಳು)

**********

ಶಂಕಿತ ಭಯೋತ್ಪಾದಕರು ಮತ್ತು ಭದ್ರತಾಪಡೆಗಳ ನಡುವೆ ನಿನ್ನೆ ಗುಂಡಿನ ಕಾಳಗ ನಡೆದ ಹಿನ್ನೆಲೆಯಲ್ಲಿ ಜಮ್ಮು-ಕಾಶ್ಮೀರದ ಉದಂಪುರ್ ಜಿಲ್ಲೆಯ ಮಾತ ಗ್ರಾಮದಲ್ಲಿ ಶೋಧ ಕಾರ್ಯಾಚರಣೆಗಳು ಮುಂದುವರೆದಿದೆ. ಅರಣ್ಯದ ಮಧ್ಯೆ ಮೂವರು ಭಯೋತ್ಪಾದಕರು ಅಡಗಿ ಕುಳಿತಿದ್ದಾರೆಂಬ ಮಾಹಿತಿ ಹಿನ್ನೆಲೆಯಲ್ಲಿ ಕಾರ್ಯಾಚರಣೆಯನ್ನು ಮುಂದುವರೆಸಲಾಗಿದೆ ಎಂದು ಉದಂಪುರದ ಪೊಲೀಸ್ ವರಿಷ್ಠಾಧಿಕಾರಿ ಅಮೋದ್ ಅಶೋಕ್ ನಾಗ್ಪುರೆ ತಿಳಿಸಿದ್ದಾರೆ. ಎತ್ತರದ ಬೆಟ್ಟಗಳು ನದಿ ಹಾಗೂ ದಟ್ಟ ಅರಣ್ಯ ಇರುವುದರಿಂದ ಭಯೋತ್ಪಾದಕರು ಎಲ್ಲಿ ಅಡಗಿದ್ದಾರೆಂದು

ಹುಡುಕುವುದು ಕಷ್ಟಕರ. ಹಾಗಾಗಿ ಅವರ ಶೋಧಕ್ಕೆ ಸೇನೆಯ ಎಲ್ಲ ವಿಭಾಗಗಳ ಯೋಧರೊಂದಿಗೆ ಕಾರ್ಯಾಚರಣೆ ನಡೆಸಲಾಗುತ್ತಿದೆ ಎಂದು ಹೇಳಿದ್ದಾರೆ.

**********

ಮಹತ್ವದ ಬೆಳವಣಿಗೆಯಲ್ಲಿ ಅಮೆರಿಕ ಅಧ್ಯಕ್ಷ ಡೋನಾಲ್ಡ್ ಟ್ರಂಪ್, ಚೀನಾ ಹೊರತುಪಡಿಸಿದರೆ ಉಳಿದ ದೇಶಗಳಿಗೆ ಪ್ರತಿ ಸುಂಕ ವಿಧಿಸುವ ತೀರ್ಮಾನವನ್ನು ೯೦ ದಿನಗಳ ಕಾಲ ಮುಂದೂಡುವುದಾಗಿ ಪ್ರಕಟಿಸಿದ್ದಾರೆ. ಅವರು, ತಮ್ಮ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಪ್ರತಿ ಸುಂಕ ಮತ್ತು ಶೇಕಡ ೧೦ರಷ್ಟು ಸುಂಕ ವಿಧಿಸುವ ತೀರ್ಮಾನ ೯೦ ದಿನಗಳ ನಂತರ ಜಾರಿಯಾಗಲಿದೆ. ಆದರೆ ಚೀನಾದ ಹಲವು ಉತ್ಪನ್ನಗಳ ಮೇಲೆ ಶೇಕಡ ೧೨೫ರಷ್ಟು ತೆರಿಗೆ ವಿಧಿಸಲಾಗಿದ್ದು, ಅದು ತಕ್ಷಣದಿಂದಲೇ ಜಾರಿಗೆ ಬರುತ್ತದೆ ಎಂದು ತಿಳಿಸಿದ್ದಾರೆ.

ಧ್ವನಿ : ಡೋನಾಲ್ಡ್ ಟ್ರಂಪ್ (೨೨ ಸೆಕೆಂಡ್‌ಗಳು)

**********

ಬೆಂಗಳೂರಿನ ಎಂ.ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆಯಲಿರುವ ಐಪಿಎಲ್ ಕ್ರಿಕೆಟ್ ಪಂದ್ಯದಲ್ಲಿ ಇಂದು ರಾಯಲ್ ಚಾಲೆಂಜರ್ಸ್ ಬೆಂಗಳೂರು ಹಾಗೂ ಡೆಲ್ಲಿ ಕ್ಯಾಪಿಟಲ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭:೩೦ಕ್ಕೆ ಆರಂಭವಾಗಲಿದೆ. ಕಳೆದ ರಾತ್ರಿ ಗುಜರಾತ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ನಡೆದ ಪಂದ್ಯದಲ್ಲಿ ರಾಜಸ್ತಾನ ರಾಯಲ್ಸ್ ತಂಡದ ವಿರುದ್ಧ ಗುಜರಾತ್ ಟೈಟಾನ್ಸ್ ೫೮ ರನ್‌ಗಳಿಂದ ಜಯಗಳಿಸಿದೆ. ಈ ಗೆಲುವಿನೊಂದಿಗೆ ಗುಜರಾತ್ ಅಂಕ ಪಟ್ಟಿಯಲ್ಲಿ ಮೊದಲನೇ ಸ್ಥಾನಕ್ಕೇರಿದೆ.

*****END*****